ಆಯುಕ್ತರು
ಕಾರ್ಮಿಕ ಆಯುಕ್ತರ ಕಛೇರಿ

ಕರ್ನಾಟಕ ಸರ್ಕಾರ
ಕಾರ್ಮಿಕ ಇಲಾಖೆ

"ಕಾರ್ಮಿಕ ಭವನ", ಐಟಿಐಕಾಲೇಜ್‌ಕಾಂಪೌಂಡ್,
ಬನ್ನೇರುಘಟ್ಟರಸ್ತೆ, ಬೆಂಗಳೂರು-560029
ಕಛೇರಿ: 080-29753078 ಇಮೇಲ್:
labour.commissioner42@gmail.com

ಸಂಖ್ಯೆ:ಪಿ&ಎಸ್/ಎನ್ಎಫ್‌ಹೆಚ್/ಸಿಆರ್-04/2020-21 ದಿನಾಂಕ:09-12-2020

# ಕಛೇರಿ ಆದೇಶ

ವಿಷಯ: ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆ-2020 ಕೋವಿಡ್ -19 ಹಿನ್ನಲೆಯಲ್ಲಿ ಮತದಾನ ಮಾಡುವ ಕುರಿತು ಮತ್ತು ಸೂಕ್ತ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ ರಾಜ್ಯಾದ್ಯಂತ ಮತದಾರರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆ-2020 ರಾಜ್ಯದಲ್ಲಿ ದಿನಾಂಕ 22/12/2020 ಮತ್ತು 27/12/2020 ರಂದು ಎರಡು ಹಂತಗಳಲ್ಲಿ ಗ್ರಾಮ ಪಂಚಾಯಿತಿ ಸಾರ್ವತ್ರಿಕ ಚುನಾವಣೆ-2020 ನಡೆಸಲು ಅಧಿಸೂಚನೆ ಹೊರಡಿಸಲಾಗಿದ್ದು, ಗ್ರಾಮೀಣ ಪ್ರದೇಶದ ಜನರು ಚುನಾವಣೆಯಲ್ಲಿ ಸಕ್ರಿಯವಾಗಿ ಭಾಗವಹಿಸುವ ನಿಟ್ಟಿನಲ್ಲಿ ಚುನಾವಣೆಗೆ ಸ್ಪರ್ಧಿಸುವ ಅಭ್ಯರ್ಥಿಗಳಿಗೆ ಅರ್ಹತೆ, ಮೀಸಲಾತಿ, ಮತದಾರರು ಯೋಗ್ಯ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ ಹಾಗೂ ಕೋವಿಡ್-19 ಸೋಂಕಿನ ಹಿನ್ನೆಲೆಯಲ್ಲಿ ಸುರಕ್ಷತಾ ಕ್ರಮಗಳೊಂದಿಗೆ ಚುನಾವಣಾ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವ ಬಗ್ಗೆ ಮತ್ತು ಇತರೆ ವಿಷಯಗಳ ಬಗ್ಗೆ ಮತ್ತು ಇತರೆ ವಿಷಯಗಳ ಬಗ್ಗೆ ಜಾಗೃತಿ ಮೂಡಿಸುವುದು ಹಾಗೂ ಅರಿವು ಮೂಡಿಸುವ ಕುರಿತು ನಿರ್ದೇಶನಗಳನ್ನು ನೀಡಿರುತ್ತಾರೆ.

ಕಾರ್ಮಿಕ ಇಲಾಖೆಯ ವತಿಯಿಂದ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಈ ಕೆಳಕಂಡಂತೆ ನಿರ್ದೇಶನಗಳನ್ನು ನೀಡಲಾಗಿರುತ್ತದೆ.

1. ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಂಗಡಿ, ವಾಣಿಜ್ಯ ಸಂಸ್ಥೆಗಳು, ಫ್ಯಾಕ್ಟರಿ ಮತ್ತು ಕಾರ್ಖಾನೆಗಳಲ್ಲಿ ಮತದಾನ ಮಾಡುವಂತೆ ಜನರಲ್ಲಿ ಅರಿವು ಮೂಡಿಸುವುದು

2. ನಗರ ವ್ಯಾಪ್ತಿಯಲ್ಲಿ ಇರುವ ಅಂಗಡಿ, ವಾಣಿಜ್ಯ ಸಂಸ್ಥೆಗಳು, ಫ್ಯಾಕ್ಟರಿ ಮತ್ತು ಕಾರ್ಖಾನೆಗಳಲ್ಲೂ ಗ್ರಾಮಪಂಚಾಯಿತಿಗಳಿಂದ ಕಾರ್ಮಿಕರು

ಕೆಲಸಕ್ಕೆ ಆಗಮಿಸುತ್ತಿದ್ದಲ್ಲಿ ಅವರಿಗೂ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

3. ಯಾವುದೇ ದುಡ್ಡು ಹಣಕಾಸಿನ ಆಮಿಷಕ್ಕೆ ಒಳಗಾಗದೆ ಮತದಾನ ಮಾಡಲು ಅರಿವು ಮೂಡಿಸುವುದು.

4. ಅರ್ಹ ಹಾಗೂ ಯೋಗ್ಯ ಅಭ್ಯರ್ಥಿಗಳು ಆಯ್ಕೆಯಾಗುವಂತೆ ಕ್ರಮವಹಿಸುವಂತೆ ತಿಳಿಸುವುದು.

5. ಕೋವಿಡ್-19 ಸೋಂಕಿನ ಹಿನ್ನಲೆಯಲ್ಲಿ ಮಾಸ್ಕ್ ಧರಿಸಲು ಮತ್ತು ಸಾಮಾಜಿಕ ಅಂತರವನ್ನು ಕಾಯ್ದುಕೊಂಡು ಮತದಾನ ಮಾಡಲು ಜಾಗೃತಿ ಮೂಡಿಸುವುದು

6. ವೃತ್ತಿ ಸಂಘಗಳು, ಸ್ವಯಂಸೇವಾ ಸಂಘಗಳು ಜೊತೆಗೂಡಿ ಕಾರ್ಯಕ್ರಮಗಳನ್ನು ಆಯೋಜಿಸುವುದು.

7. ಈ ನಿಟ್ಟಿನಲ್ಲಿ ಜಿಲ್ಲಾಡಳಿತ ಹಾಗೂ ತಾಲ್ಲೂಕು ಆಡಳಿತದಿಂದ ಸಹಕಾರ ಕೋರಿದ್ದಲ್ಲಿ ಅವರಿಗೆ ಸಹಕಾರವನ್ನು ಒದಗಿಸುವುದು.

8. ಮೇಲ್ಕಂಡ ಚಟುವಟಿಕೆಗಳಿಗೆ ಯಾವುದೇ ಪ್ರತ್ಯೇಕ ಆಯವ್ಯಯವನ್ನು ಒದಗಿಸಲಾಗುವುದಿಲ್ಲ.

ಮೇಲ್ಕಂಡ ಅಂಶಗಳನ್ನು ಎಲ್ಲಾ ಜಿಲ್ಲಾ ಮಟ್ಟ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು/ನಿರೀಕ್ಷಕರುಗಳು/ಹಿರಿಯ ಕಾರ್ಮಿಕ ನಿರೀಕ್ಷಕರುಗಳು ಅತ್ಯಂತ ಹೆಚ್ಚಿನ ಮತದಾರರು ಚುನಾವಣೆಯಲ್ಲಿ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಕುರಿತು ಅರಿವು ಮೂಡಿಸುವಂತೆ ಈ ಮೂಲಕ ಸೂಚಿಸಲಾಗಿದೆ.

10/12

ಆಯುಕ್ತರು
ಕಾರ್ಮಿಕ ಇಲಾಖೆ

ಇವರಿಗೆ,

1) ಎಲ್ಲಾ ಉಪ ಕಾರ್ಮಿಕ ಆಯುಕ್ತರುಗಳಿಗೆ

2) ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರುಗಳಿಗೆ

3)ಎಲ್ಲಾ ಕಾರ್ಮಿಕ ಅಧಿಕಾರಿಗಳಿಗೆ (ತಮ್ಮ ಅಧೀನದಲ್ಲಿ ಬರುವ ಕಾರ್ಮಿಕ ನಿರೀಕ್ಷಕರು/ಹಿರಿಯ ಕಾರ್ಮಿಕ ನಿರೀಕ್ಷಕರುಗಳಿಗೆ ಸೂಚಿಸುವುದು)